ಆರಾಧನಾ ಯೋಜನೆಯಡಿ ಬಿಡುಗಡೆಯಾದ ಅನುದಾನವನ್ನು ಶಾಸಕರ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಯಿಂದ ಹಂಚಿಕೆ ಮಾಡಲಾಗುವುದು.

ಇ) 2002–2003ನೇ ಸಾಲಿನಲ್ಲಿ ಮಂಜೂರಾದ ಅನುದಾನವನ್ನು ಬಿಡುಗಡೆ ಮಾಡಿ ದಿ:20.6.2003 ರಂದು ಶಿವಮೊಗ್ಗ ಜಿಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸಲಾಗಿದೆ.

ಶಿಕಾರಿಪುರ ಡಿಗ್ರಿ ಕಾಲೇಜು ಕಟ್ಟಡ

2475 (3222) : ಶ್ರೀ ಮಹಾಲಿಂಗಪ್ಪ ಬಿ.ಎನ್. (ಶಿಕಾರಿಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿಕಾರಿಪುರ ಡಿಗ್ರಿ ಕಾಲೇಜಿನ ಕಟ್ಟಡಕ್ಕೆ ಮಂಜೂರಾದ ಹಣವೆಷ್ಟು;

ಆ) ಕಾಲೇಜಿನ ಕಾಮಗಾರಿ ಕಳಪೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಸರ್ಕಾರ ಕಾಮಗಾರಿ ಕಳಪೆಯಾದ ಬಗ್ಗೆ ಯಾವ ಕ್ರಮ ಕೈಗೊಂಡಿದೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) ಶಿಕಾರಿಪುರದಲ್ಲಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣದ ಮೊದಲನೇ ಹಂತದ ಕಾಮಗಾರಿಗೆ ರೂ. 12.00 ಲಕ್ಷ ಹಾಗೂ ಎರಡನೇ ಹಂತದ ಕಾಮಗಾರಿಗೆ ರೂ. 20.67 ಲಕ್ಷ ಹಣ ಮಂಜೂರಾಗಿರುತ್ತದೆ.

ಆ) ಬಂದಿರುತ್ತದೆ.

ಇ) ಲೋಕಾಯುಕ್ತ ಬೆಂಗಳೂರು, ಇವರು ಕಾಮಗಾರಿಯ ತಪಾಸಣೆ ನಡೆಸಿದ್ದು ವರದಿ ನಿರೀಕ್ಷೆಯಲ್ಲಿರುತ್ತದೆ.

ಗೋಕರ್ಣವನ್ನು ತಾಲ್ಲೂಕಾಗಿ ರಚನೆ ಮಾಡುವುದು

2476 (3086) : ಶ್ರೀ ಮೋಹನ್ ಕೆ. ಶೆಟ್ಟಿ (ಕುಮಟ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕುಮಟಾ ತಾಲ್ಲೂಕಿನ ವ್ಯಾಪ್ತಿಗೊಳಪಟ್ಟಿರುವ ಗೋಕರ್ಣವು ಪ್ರಸಿದ್ಧ ಐತಿಹಾಸಿಕ, ಪ್ರವಾಸಿ, ಮೀನುಗಾರಿಕಾ ಬಂದರು ವಾಣಿಜ್ಯ ಕೇಂದ್ರವಾಗಿದ್ದು, ಗೋಕರ್ಣವನ್ನು ತಾಲ್ಲೂಕು ಕೇಂದ್ರವನ್ನಾಗಿ ರಚನೆ ಮಾಡಲು ಸರ್ಕಾರ ಯೋಚಿಸಿದೆಯೇ; ಹಾಗಿದ್ದರೆ, ಈ ಕುರಿತು ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು):

ಅ) ಇಲ್ಲ.

ಕೇಂದ್ರ ಸರ್ಕಾರದ ಕೇಂದ್ರ ರಸ್ತೆ ನಿಧಿ

2477 (3087) : ಶ್ರೀ ಮೋಹನ ಕೆ ಶೆಟ್ಟಿ (ಕುಮಟಾ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೇಂದ್ರ ಸರ್ಕಾರದ 'ಕೇಂದ್ರ ರಸ್ತೆ ನಿಧಿ' (ಸೆಂಟ್ರಲ್ ರೋಡ್ ಫಂಡ್) ಕುಮಟಾ ವಿಧಾನ ಸಭಾ ಕ್ಷೇತ್ರವನ್ನೊಳಗೊಂಡು ಹಿಂದುಳಿದ ಪ್ರದೇಶಗಳ ವಿಧಾನ ಸಭಾ ಕ್ಷೇತ್ರಗಳಿಗೆ ಅಗತ್ಯಗಳಿಗನುಗುಣವಾಗಿ ಸರಿಯಾಗಿ ಹಂಚಿಕೆಯಾಗುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ: